Akashvani: Bangalore
National Bulletin In Kannada
13.03.2026: 7.35AM
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
13.03.2026: 7.35AM
********

**ಮುಖ್ಯಾಂಶಗಳು :**

1. ಪಶ್ಚಿಮ ಏಷ್ಯಾದಲ್ಲಿನ ಅಸ್ಥಿರತೆಯ ನಡುವೆಯೂ ಭಾರತ ಜಾಗತಿಕವಾಗಿ ವಿಶ್ವಾಸಾರ್ಹ ರಾಷ್ಟ್ರವಾಗಿ ಉಳಿದಿದೆ - ಪ್ರಧಾನಿ ನರೇಂದ್ರ ಮೋದಿ
2. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತು ಇಂದು ಬಿಡುಗಡೆ
3. ಇರಾನ್‌ನಲ್ಲಿರುವ ಸುಮಾರು ೯ ಸಾವಿರ ಭಾರತೀಯ ಪ್ರಜೆಗಳ ರಕ್ಷಣೆಗೆ ಬದ್ಧ - ಕೇಂದ್ರ ಸರ್ಕಾರ
4. ಎಫ್‌ಐಎಚ್ ಹಾಕಿ ಮಹಿಳಾ ವಿಶ್ವಕಪ್; ಸೆಮಿಫೈನಲ್‌ನಲ್ಲಿಂದು ಭಾರತ - ಇಟಲಿ ಮುಖಾಮುಖಿ

**********

ಪಶ್ಚಿಮ ಏಷ್ಯಾದಲ್ಲಿನ ಅಸ್ಥಿರತೆಯ ನಡುವೆಯೂ ಭಾರತ ಜಾಗತಿಕವಾಗಿ ಸುಸ್ಥಿರ ಮತ್ತು ವಿಶ್ವಾಸಾರ್ಹ ರಾಷ್ಟ್ರವಾಗಿ ಉಳಿದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಎನ್‌ಎಕ್ಸ್‌ಟಿ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಈ ಪ್ರದೇಶದ ಸವಾಲಿನ ಪರಿಸ್ಥಿತಿಯ ಹೊರತಾಗಿಯೂ ದೇಶ ಸ್ಥಿರವಾಗಿದ್ದು, ಚೇತರಿಸಿಕೊಳ್ಳುವ ಸಾಮರ್ಥ್ಯವನ್ನು ಹೊಂದಿದೆ ಎಂದು ತಿಳಿಸಿದರು.

****ಧ್ವನಿ**** ಪ್ರಧಾನಿ ನರೇಂದ್ರ ಮೋದಿ

ಪಶ್ಚಿಮ ಏಷ್ಯಾದ ಸಂಘರ್ಷದಿಂದಾಗಿ ಪೂರೈಕೆ ಸರಪಳಿಯಲ್ಲಿ ಉಂಟಾಗುವ ಅಡೆತಡೆಗಳನ್ನು ಎದುರಿಸಲು ಕೇಂದ್ರ ಸರ್ಕಾರ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಅವರು ಹೇಳಿದರು. ಇಂಧನ ವಲಯಕ್ಕೆ ಸಂಬಂಧಿಸಿದ ಸವಾಲುಗಳನ್ನು ಎದುರಿಸಲು ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದ ಅವರು, ತೈಲ ಉತ್ಪಾದನೆಯನ್ನು ಉತ್ತೇಜಿಸಲು, ಇಂಧನ ಲಭ್ಯತೆಯನ್ನು ವಿಸ್ತರಿಸಲು ಮತ್ತು ಈ ವಲಯದಲ್ಲಿ ಸ್ವಾವಲಂಬನೆಯನ್ನು ಬಲಪಡಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಸಂಘರ್ಷದ ಪರಿಸ್ಥಿತಿಗಳ ಹೊರೆ ನಾಗರಿಕರ ಮೇಲೆ ಬೀಳದಂತೆ ಕೇಂದ್ರ ಸರ್ಕಾರ ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಅವರು ಹೇಳಿದರು.

**********

ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂನ ಗುವಾಹಟಿಯಲ್ಲಿ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪ್ರಧಾನಿ ನರೇಂದ್ರ ಮೋದಿ ಅವರು ಸುಮಾರು ೯ ಕೋಟಿ ೩೨ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮೂಲಕ ೧೮ ಸಾವಿರದ ೬೪೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಿದ್ದಾರೆ ಎಂದು ತಿಳಿಸಿದ್ದಾರೆ. ಈ ಯೋಜನೆಯಡಿ ಇದುವರೆಗೆ ರೈತರಿಗೆ ೪ ಲಕ್ಷ ೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು

ವರ್ಗಾಯಿಸಲಾಗಿದೆ. ಮುಂದಿನ ಕಂತಿನ ಬಿಡುಗಡೆಯೊಂದಿಗೆ ಒಟ್ಟು ಮೊತ್ತ ೪ ಲಕ್ಷ ೨೭ ಸಾವಿರ ಕೋಟಿ ರೂಪಾಯಿಗಳನ್ನು ಮೀರಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**********

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನಗಳ ಕಾಲ ಅಸ್ಸಾಂಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ೪೭ ಸಾವಿರ ೮೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ರಸ್ತೆ ಮೂಲಸೌಕರ್ಯ ಯೋಜನೆಯಾದ ಅಸ್ಸಾಂ ಮಾಲಾ ३.೦ ಮತ್ತು ನಾಲ್ಕು ಮೇಲ್ಸೇತುವೆಗಳು ಹಾಗೂ ಬಿಟಿಸಿ ಪ್ರದೇಶಕ್ಕಾಗಿ ಎರಡು ಸೇತುವೆಗಳು ಸೇರಿದಂತೆ ೬ ರಸ್ತೆ ಯೋಜನೆಗಳಿಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಅಲ್ಲದೇ, ಕೊಕ್ರಜಾರ್‌ನಲ್ಲಿ ರೈಲ್ವೆ ಆವರ್ತಕ ಪರೀಕ್ಷಾ ಕಾರ್ಯಾಗಾರಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಹಾಗೂ ಮೂರು ಹೊಸ ರೈಲುಗಳಾದ ಕಾಮಾಖ್ಯ-ಚಾರ್ಲಪಲ್ಲಿ ಅಮೃತ್ ಭಾರತ್ ಎಕ್ಸ್‌ಪ್ರೆಸ್; ಗುವಾಹಟಿ-ನ್ಯೂ ಜಲ್‌ಪೈಗುರಿ ಎಕ್ಸ್‌ಪ್ರೆಸ್ ಮತ್ತು ನಾರಂಗಿ-ಅಗರ್ತಲಾ ಎಕ್ಸ್‌ಪ್ರೆಸ್‌ಗೆ ಹಸಿರು ನಿಶಾನೆ ತೋರಲಿದ್ದಾರೆ. ಗುವಾಹಟಿಗೆ ಪ್ರಯಾಣಿಸುವ ಮೊದಲು ಪ್ರಧಾನಿಯವರು ಕೊಕ್ರಜಾರ್‌ನಲ್ಲಿ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಗುವಾಹಟಿಯಲ್ಲಿ, ಪ್ರಧಾನಿಯವರು, ಸುಮಾರು ಒಂದು ಸಾವಿರ ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಪ್ರಧಾನಿ ಅವರು ನಾಳೆ, ಸಿಲ್ಚಾರ್‌ನಲ್ಲಿ ೨३ ಸಾವಿರದ ೫೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

**********

೨೦೨೫-೨೦೨೬ರ ಎರಡನೇ ಹಂತದ ಅನುದಾನದ ಪೂರಕ ಬೇಡಿಕೆಗಳ ಕುರಿತು ಲೋಕಸಭೆಯಲ್ಲಿಂದು ಹೆಚ್ಚಿನ ಚರ್ಚೆ ನಡೆಯಲಿದೆ.ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸದನದಲ್ಲಿ ಚರ್ಚೆಗೆ ಉತ್ತರಿಸಲಿದ್ದಾರೆ. ರಾಜ್ಯಸಭೆಯಲ್ಲಿ, ಗ್ರಾಮೀಣಾಭಿವೃದ್ಧಿ ಸಚಿವಾಲಯದ ಕಾರ್ಯವೈಖರಿಯ ಕುರಿತು ಹೆಚ್ಚಿನ ಚರ್ಚೆ ನಡೆಯಲಿದೆ. ಲೋಕಸಭೆಯಲ್ಲಿ ನಿನ್ನೆ, ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರು ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಉಂಟಾಗುವ ಜಾಗತಿಕ ಇಂಧನ ಪೂರೈಕೆಯಲ್ಲಿನ ಅಡಚಣೆಗೆ ಮುಂಜಾಗ್ರತವಾಗಿ ಕೇಂದ್ರ ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

**********

ಇರಾನ್‌ನಲ್ಲಿ ವಿದ್ಯಾರ್ಥಿಗಳು, ಉದ್ಯಮಿಗಳು, ಕಾರ್ಮಿಕರು, ಯಾತ್ರಿಕರು, ನಾವಿಕರು ಮತ್ತು ಮೀನುಗಾರರು ಸೇರಿದಂತೆ ಸುಮಾರು ಒಂಬತ್ತು ಸಾವಿರ ಭಾರತೀಯ ಪ್ರಜೆಗಳಿದ್ದಾರೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ರಾಜ್ಯಸಭೆಯಲ್ಲಿ ನಿನ್ನೆ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಪಬಿತ್ರಾ ಮಾರ್ಗರಿಟಾ, ವಿದೇಶಾಂಗ ಸಚಿವಾಲಯ ಮತ್ತು ಇರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು, ಭಾರತೀಯ ಪ್ರಜೆಗಳಿಗೆ ನಿಯಮಿತವಾಗಿ ಸಲಹೆಗಳನ್ನು ನೀಡುತ್ತಿದೆ ಎಂದು ತಿಳಿಸಿದರು. ಇರಾನ್‌ಗೆ ಅನಗತ್ಯ ಪ್ರಯಾಣವನ್ನು ತಪ್ಪಿಸುವಂತೆ ಮತ್ತು ಅಲ್ಲಿಂದ ವಾಪಸಾಗಲು ಇಚ್ಛಿಸುವವರು ಲಭ್ಯವಿರುವ ಮಾರ್ಗಗಳ ಮೂಲಕ ಹಿಂದಿರುಗುವಂತೆ ವಿದೇಶಾಂಗ ಸಚಿವಾಲಯ ತಿಳಿಸಿದೆ. ಇರಾನ್‌ನಲ್ಲಿರುವ ಭಾರತೀಯ ಪ್ರಜೆಗಳು ಅತ್ಯಂತ ಜಾಗರೂಕರಾಗಿರಲು, ಪರಿಸ್ಥಿತಿಯ ಬಗ್ಗೆ ಅರಿವು ಹೊಂದಿರಲು, ಯಾವುದೇ ಬೆಳವಣಿಗೆಗಳಿಗಾಗಿ ಸ್ಥಳೀಯ ಮಾಧ್ಯಮಗಳನ್ನು ಗಮನಿಸಲು ಮತ್ತು ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿರಲು ಭಾರತೀಯ ರಾಯಭಾರ ಕಚೇರಿ ಸಲಹೆ ನೀಡಿದೆ ಎಂದು ಅವರು ಹೇಳಿದರು. ಭಾರತಕ್ಕೆ ಮರಳಲು

ಬಯಸುವ ಭಾರತೀಯರ ವಾಪಸಾತಿಗೆ ರಾಯಭಾರ ಕಚೇರಿಯು ಅನುಕೂಲ ಮಾಡಿಕೊಡುತ್ತಿದೆ. ಇರಾನ್‌ನಲ್ಲಿ ಸಂಕಷ್ಟದಲ್ಲಿರುವ ಅಥವಾ ಸಿಲುಕಿಕೊಂಡಿರುವ ಭಾರತೀಯರಿಗಾಗಿ ಸೂಕ್ತ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

**********

ಪಶ್ಚಿಮ ಏಷ್ಯಾ ಪ್ರದೇಶದ ಗಂಭೀರ ಪರಿಸ್ಥಿತಿಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರೊಂದಿಗೆ ದೂರವಾಣಿ ಮೂಲಕ ಚರ್ಚೆ ನಡೆಸಿದರು. ಉದ್ವಿಗ್ನತೆ ಹೆಚ್ಚಳ, ನಾಗರಿಕರ ಜೀವಹಾನಿ ಹಾಗೂ ನಾಗರಿಕ ಮೂಲಸೌಕರ್ಯಕ್ಕೆ ಆಗಿರುವ ಹಾನಿಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಕಳವಳ ವ್ಯಕ್ತಪಡಿಸಿದರು. ಭಾರತೀಯ ಪ್ರಜೆಗಳ ಸುರಕ್ಷತೆ ಮತ್ತು ಭದ್ರತೆ, ಸರಕು ಹಾಗೂ ಇಂಧನದ ಅಡೆತಡೆಯಿಲ್ಲದ ಸಾಗಣೆಯು ಭಾರತದ ಪ್ರಮುಖ ಆದ್ಯತೆಗಳಾಗಿವೆ ಎಂದು ಅವರು, ಶಾಂತಿ ಮತ್ತು ಸ್ಥಿರತೆಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು. ಎರಡೂ ಕಡೆಯವರು ಸಂವಾದ ಮತ್ತು ರಾಜತಾಂತ್ರಿಕತೆ ಮೂಲಕ ಬಿಕ್ಕಟ್ಟು ಪರಿಹರಿಸುವಂತೆ ಪ್ರಧಾನಿ ನರೇಂದ್ರ ಮೋದಿ ಒತ್ತಾಯಿಸಿದರು.

**********

ಇರಾನ್‌ನ ನೂತನ ಸರ್ವೋಚ್ಚ ನಾಯಕ ಅಯತೊಲ್ಲಾ ಮೊಜ್ತಾಬಾ ಖಮೇನಿ ಅವರು ಗಲ್ಫ್ ಅರಬ್ ರಾಷ್ಟ್ರಗಳ ಮೇಲಿನ ದಾಳಿಯನ್ನು ಮುಂದುವರಿಸುವುದಾಗಿ ಹಾಗೂ ಅಮೆರಿಕ ಮತ್ತು ಇಸ್ರೇಲ್ ವಿರುದ್ಧ ಆಯಕಟ್ಟಿನ ಹಾರ್ಮುಜ್ ಜಲಸಂಧಿಯನ್ನು ಪರಿಣಾಮಕಾರಿಯಾಗಿ ಬಂದ್ ಮಾಡುವ ಮೂಲಕ, ಈ ಕ್ರಮವನ್ನು ಒತ್ತಡದ ಭಾಗವಾಗಿ ಬಳಸಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಿದ್ದಾರೆ. ಇಸ್ರೇಲ್ ದಾಳಿಯಲ್ಲಿ ಹತರಾದ ತಮ್ಮ ತಂದೆಯ ಉತ್ತರಾಧಿಕಾರಿಯಾಗಿ ಆಯ್ಕೆಯಾದ ನಂತರ ಇದು ಅಯತೊಲ್ಲಾ ಮೊಜ್ತಾಬಾ ಖಮೇನಿ ಅವರ ಮೊದಲ ಸಾರ್ವಜನಿಕ ಹೇಳಿಕೆಯಾಗಿದೆ. ಯುದ್ಧದ ಆರಂಭಿಕ ದಾಳಿಯಲ್ಲಿ ಗಾಯಗೊಂಡಿದ್ದಾರೆ ಎಂದು ಇಸ್ರೇಲ್ ಶಂಕಿಸಿರುವ ಮೊಜ್ತಾಬಾ ಖಮೇನಿ ಅವರು ಅಂದಿನಿಂದ ಸಾರ್ವಜನಿಕವಾಗಿ ಕಾಣಿಸಿಕೊಂಡಿರಲಿಲ್ಲ.

**********

ಇಸ್ರೇಲ್ ದಾಳಿಯಿಂದಾಗಿ ಇರಾನ್‌ನ ಪ್ರಮುಖ ಪರಮಾಣು ವಿಜ್ಞಾನಿಗಳು ಹತರಾಗಿದ್ದಾರೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ತಿಳಿಸಿದ್ದಾರೆ. ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇರಾನ್‌ನ ನೂತನ ಸರ್ವೋಚ್ಚ ನಾಯಕ ಅಯತೊಲ್ಲಾ ಮೊಜ್ತಾಬಾ ಖಮೇನಿ ಅವರು ಇಸ್ರೇಲ್ ಸೇನೆಯಿಂದಾಗಿ ಸಾರ್ವಜನಿಕವಾಗಿ ಕಾಣಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು. ಇರಾನ್‌ನ ಜನರನ್ನು ಉದ್ದೇಶಿಸಿ ಮಾತನಾಡಿದ ಬೆಂಜಮಿನ್ ನೆತನ್ಯಾಹು, ಸ್ವಾತಂತ್ರ್ಯದ ಕಡೆಗೆ ಹೊಸ ಹಾದಿಯನ್ನು ಹಿಡಿಯುವ ಕ್ಷಣವು ಹತ್ತಿರವಾಗುತ್ತಿದೆ ಮತ್ತು ಇಸ್ರೇಲ್ ನಿಮ್ಮ ಪರವಾಗಿ ನಿಂತಿದೆ. ಆದರೆ ಇದು ಅಂತಿಮವಾಗಿ ಅಲ್ಲಿನ ಜನರ ಮೇಲೆ ಅವಲಂಬಿತವಾಗಿದೆ ಎಂದು ತಿಳಿಸಿದರು.

**********

೨೦೨೬ರ ಎಫ್‌ಐಎಚ್ ಹಾಕಿ ಮಹಿಳಾ ವಿಶ್ವಕಪ್ ಪಂದ್ಯಾವಳಿಯ ಸೆಮಿಫೈನಲ್‌ನಲ್ಲಿ ಇಂದು ಭಾರತ, ಇಟಲಿ ತಂಡವನ್ನು ಎದುರಿಸಲಿದೆ. ಹೈದರಾಬಾದ್‌ನಲ್ಲಿ ಕಳೆದ ಬುಧವಾರ ನಡೆದ ಬಿ ಗುಂಪಿನ ಅರ್ಹತಾ ಪಂದ್ಯದಲ್ಲಿ ಭಾರತ ತಂಡ, ವೇಲ್ಸ್

ವಿರುದ್ಧ ೪-೧ ಗೋಲುಗಳಿಂದ ಭರ್ಜರಿ ಜಯ ಸಾಧಿಸಿತು. ಈ ಗೆಲುವಿನೊಂದಿಗೆ, ಭಾರತ ತಂಡ, ಸೆಮಿಫೈನಲ್ ಸ್ಥಾನ ಖಚಿತಪಡಿಸಿಕೊಂಡಿತ್ತು.

**********

ಸ್ವಿಟ್ಜರ್‌ಲ್ಯಾಂಡ್‌ನ ಬಾಸೆಲ್‌ನಲ್ಲಿ ನಿನ್ನೆ ನಡೆದ ಸ್ವಿಸ್ ಒಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದ ಎರಡನೇ ಸುತ್ತಿನಲ್ಲಿ ಭಾರತದ ಶೆಟ್ಲರ್ ಕಿರಣ್ ಜಾರ್ಜ್ ಪರಾಭವಗೊಂಡಿದ್ದಾರೆ. ಕಿರಣ್ ಜಾರ್ಜ್, ಹಾಂಕಾಂಗ್‌ನ ವಿಶ್ವದ ೪೪ನೇ ಶ್ರೇಯಾಂಕಿತ ಜೇಸನ್ ಗುನಾವಾನ್ ವಿರುದ್ಧ ೨೧-೧೮, ೧೬-೨೧, ೨೧-೧೬ ಅಂತರದಲ್ಲಿ ಸೋತರು. ಈ ಮಧ್ಯೆ, ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ಮೂರು ಪಂದ್ಯಗಳ ರೋಮಾಂಚಕ ಹೋರಾಟದಲ್ಲಿ ಪುರುಷರ ಡಬಲ್ಸ್ ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆದುಕೊಂಡರು. ಈ ಜೋಡಿ, ಜಪಾನ್‌ನ ಹಿರೋಕಿ ಒಕಾಮುರ ಮತ್ತು ಕ್ಯೋಹಿ ಯಮಶಿತ ಅವರನ್ನು ೨೧-೧೫, ೧೫-೨೧, ೨೮-೨೬ ಅಂತರದಲ್ಲಿ ಮಣಿಸಿದರು. ಕ್ವಾರ್ಟರ್ ಫೈನಲ್‌ನಲ್ಲಿ ಸಾತ್ವಿಕ್ - ಚಿರಾಗ್ ಜೋಡಿ ಡೆನ್ಮಾರ್ಕ್‌ನ ಕ್ರಿಸ್ಟೆಯನ್ ಫೌಸ್ಟ್ ಯೋರ್ ಮತ್ತು ರಾಸ್ಮುಸ್ ಯೋರ್ ಅವರನ್ನು ಎದುರಿಸಲಿದ್ದಾರೆ.

*****END*****